# ಕರ್ನಾಟಕ ಲೋಕಾಯುಕ್ತ

**ಕಂಪ್ಲೆಂಟ್/ಉಪಲೋಕ್/ಬಿಡಿ/1879/2021/ಪಿಓ.ಎ.ಆರ್.ಇ-5**
**ಮಂಡನಾಧಿಕಾರಿಯವರ ಶಾಖೆ.**

ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 28/04/2022.

## ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ವರದಿ

**ವಿಷಯ: ಶ್ರೀ. ಟಿ.ನಾಗರಾಜ್ ಬಿನ್ ಲೇಟ್ ತಿಪ್ಪಣ್ಣ, ದ್ವಿತೀಯ ದರ್ಜೆ ಸಹಾಯಕರು, ಪತ್ರಾಂಕಿತ ಉಪ-ಖಜಾನಾಧಿಕಾರಿಗಳ ಕಛೇರಿ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್, ಕೋಲಾರ ಜಿಲ್ಲೆ,**

ಆದ ನೀವು ಸರ್ಕಾರಿ/ ಸಾರ್ವಜನಿಕ ನೌಕರರಾಗಿದ್ದು ಸರ್ಕಾರಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ ದುರ್ನಡತೆ ತೋರಿದ ಕುರಿತಂತೆ ನಿಮ್ಮ ಮೇಲೆ ಶಿಸ್ತುಕ್ರಮ ಜರುಗಿಸುವ ಬಗ್ಗೆ.

****

1. ಆರಕ್ಷಕ ನಿರೀಕ್ಷಕರು ಭ್ರಷ್ಟಾಚಾರ ನಿಗ್ರಹದಳ ಪೋಲಿಸ್ ಠಾಣೆ, ಕೋಲಾರ (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಇವರು ಸಲ್ಲಿಸಿದ ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಸಲಾಗಿ. **ಶ್ರೀ. ಟಿ.ನಾಗರಾಜ್ ಬಿನ್ ಲೇಟ್ ತಿಪ್ಪಣ್ಣ, ದ್ವಿತೀಯ ದರ್ಜೆ ಸಹಾಯಕರು, ಪತ್ರಾಂಕಿತ ಉಪ-ಖಜಾನಾಧಿಕಾರಿಗಳ ಕಛೇರಿ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್, ಕೋಲಾರ ಜಿಲ್ಲೆ** (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಆದ ನಿಮ್ಮ ಮೇಲೆ **ಶ್ರೀ. ಸಚಿನ್ ಬಿನ್ ಲೇಟ್ ವಿಕ್ಟರ್, ಎಸ್.ಡಿ.ಎ., ಸರ್ಕಾರಿ ಬಾಲ ಮಂದಿರ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್.** (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ದೂರು ಸಲ್ಲಿಸಿದ್ದು, ಸದರಿ ದೂರಿನಲ್ಲಿ ಬರೆದುಕೊಂಡ ಅಂಶವೇನೆಂದರೆ ದಿ: 05/07/2018 ರಂದು ದೂರುದಾರರು ತಮಗೆ ಬರಬೇಕಾದ 2 ವರ್ಷಗಳ ವೇತನ ಇನ್‌ಕ್ರಿಮೆಂಟ್ ಬಾಕಿ ಹಣ 6,715/- ರೂ.ಗಳಿಗೆ ಬಿಲ್ ಮಾಡಿ ಖಜಾನೆಗೆ ಕಳುಹಿಸಿದ್ದು, ದಿ: 07/07/2018 ರಂದು ದೂರುದಾರರು ಎದುರುದಾರರನ್ನು ಭೇಟಿಯಾದಾಗ ಬಿಲ್ ಪಾಸ್‌ಮಾಡಲು 3,000/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟು ದುರ್ನಡತೆ ತೋರಿಸಿದ ಬಗ್ಗೆ ಬರೆದುಕೊಂಡಿದ್ದು ಸದರಿ ದೂರು ಕೋಲಾರ ಜಿಲ್ಲೆ ಎ.ಸಿ.ಬಿ ಪೋಲಿಸ್ ಠಾಣಾ ಗುನ್ನಾ ನಂ. 11/2018 ರಲ್ಲಿ ದಾಖಲಾಗಿದ್ದು, ತನಿಖಾಧಿಕಾರಿಗಳು ತನಿಖೆಯನ್ನು ಪೂರೈಸಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಕಲಂ 7, 13 (1) (d) r/w 13 (2) ಅಡಿಯಲ್ಲಿ ದೋಷಾರೋಪಣ

ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ದೋಷಾರೋಪಣ ಪಟ್ಟಿಯನ್ನು ಪರಿಶೀಲಿಸಲಾಗಿ ಎದುರುದಾರರಾದ ನೀವು ಸರ್ಕಾರಿ ನೌಕರರಾಗಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ 3,000/-ರೂ. ಲಂಚವನ್ನು ಪಡೆದು ರೆಡ್‌ಹ್ಯಾಂಡಾಗಿ ಸಿಕ್ಕು ದುರ್ನಡತೆ ತೋರಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರು-02 ಇವರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತಾರೆ.

18. **ಎದುರುದಾರರ ಮೇಲಿನ ಆಪಾದನೆಯ ಸಂಕ್ಷಿಪ್ತ ಸಾರಾಂಶ:**

i. ದೂರುದಾರರಾದ **ಶ್ರೀ. ಸಚಿನ್ ಬಿನ್ ಲೇಟ್ ವಿಕ್ಟರ್, ಎಸ್.ಡಿ.ಎ., ಸರ್ಕಾರಿ ಬಾಲ ಮಂದಿರ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್.,** ಇವರು ದೂರಿನಲ್ಲಿ ಬರೆದುಕೊಂಡ ಅಂಶವೇನೆಂದರೆ ದಿ: 05/07/2018 ರಂದು ದೂರುದಾರರು ತಮಗೆ ಬರಬೇಕಾದ 2 ವರ್ಷಗಳ ವೇತನ ಇನ್‌ಕ್ರಿಮೆಂಟ್ ಬಾಕಿ ಹಣ 6,715/- ರೂ.ಗಳಿಗೆ ಬಿಲ್ ಮಾಡಿ ಸಿಬ್ಬಂದಿಯ ಮೂಲಕ ಖಜಾನೆಗೆ ಕಳುಹಿಸಿದ್ದು, ಬಿಲ್ಲನ್ನು ರಿಸೀವ್ ಮಾಡಿಕೊಂಡ ಬಗ್ಗೆ ಸ್ವೀಕೃತಿ ನೀಡಿರುವುದಿಲ್ಲ. ದಿ: 07/07/2018 ರಂದು ದೂರುದಾರರು ಸ್ವತ: ಎದುರುದಾರರನ್ನು ಭೇಟಿಯಾಗಿ ಹಣಕಾಸಿನ ತೊಂದರೆ ಇದೆ ಎಂದು ಹೇಳಿಕೊಂಡರೂ ಸಹ ಬಿಲ್ ಪಾಸ್‌ಮಾಡಲು 3,000/- ರೂ. ಲಂಚಕ್ಕೆ ಬೇಡಿಕೆ ಇಟ್ಟು, ಅದಕ್ಕೆ ದೂರುದಾರರು ಸಮ್ಮತಿಸಿದ ನಂತರ ಟೋಕನ್ ನಂ.1558413 ನೀಡಿರುತ್ತಾರೆ. ಆ ಕಾಲಕ್ಕೆ ನಡೆದ ಸಂಭಾಷಣೆ ಹಾಗೂ ದೃಶ್ಯವನ್ನು ದೂರುದಾರರು ತಮ್ಮ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡಿರುತ್ತಾರೆ.

ii) ದೂರುದಾರರಿಗೆ ಲಂಚ ನೀಡಲು ಮನಸ್ಸಿಲ್ಲವಾದ್ದರಿಂದ ದಿ: 10/07/2018 ರಂದು ಕೋಲಾರ ಎಸಿಬಿ ಪೋಲಿಸ್ ಠಾಣೆಗೆ ಹೋಗಿ ದೂರು ಸಲ್ಲಿಸಿದ್ದು, ಸದರಿ ದೂರು ಠಾಣಾ ಗುನ್ನಾ ನಂ.11/2018 ರಲ್ಲಿ ಕಲಂ 7, 13 (1) (d) r/w 13 (2) ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿಯಲ್ಲಿ ಪ್ರಕರಣವು ದಾಖಲಾಗಿರುತ್ತದೆ. ಪ್ರಕರಣವು ದಾಖಲಾದ ನಂತರ ತನಿಖಾಧಿಕಾರಿಗಳು ಸರ್ಕಾರಿ ಪಂಚರುಗಳಾದ 1) ಜಗದೀಶ್ (ನೆರಳುಸಾಕ್ಷಿ) 2) ಅಭಿಷೇಕ್ ಇವರುಗಳನ್ನು ಬರಮಾಡಿಕೊಂಡಿದ್ದು, ಸದರಿಯವರುಗಳ ಸಮಕ್ಷಮ ದೂರುದಾರರು ಹಾಜರುಪಡಿಸಿದ ಮೊಬೈಲ್‌ನಲ್ಲಿದ್ದ ಸಂಭಾಷಣೆಯನ್ನು ಹಾಗೂ ವಿಡಿಯೋವನ್ನು ಡಿವಿಡಿಗೆ ವರ್ಗಾಯಿಸಿಕೊಂಡಿರುತ್ತಾರೆ. ಸದರಿ ದೃಶ್ಯ ಹಾಗೂ ಸಂಭಾಷಣೆಯನ್ನು ಪಂಚರಿಗೆ ನೋಡಿಸಿ, ಕೇಳಿಸಲಾಗಿ, ಎದುರುದಾರರು ಲಂಚಕ್ಕಾಗಿ

ಬೇಡಿಕೆಯಿಟ್ಟಿರುವುದು ಕಂಡು ಬರುತ್ತದೆ. ಲಂಚ ನೀಡಲು ತಂದ ರೂ. 3,000/- (500X6) ಗಳನ್ನು ದೂರುದಾರರು ತನಿಖಾಧಿಕಾರಿಗಳ ಮುಂದೆ ಹಾಜರುಪಡಿಸಿದ್ದು, ಸದರಿ ನೋಟುಗಳ ನಂಬರುಗಳನ್ನು ಪಂಚ-1ರವರು ಬಿಳಿ ಹಾಳೆಯಲ್ಲಿ ದಾಖಲಿಸಿಕೊಂಡಿರುತ್ತಾರೆ. ಪೊಲೀಸ್ ಸಿಬ್ಬಂದಿ ನೋಟುಗಳಿಗೆ ಫಿನಾಪ್ತಲಿನ್ ಪೌಡರನ್ನು ಸವರಿ ಸದರಿ ಹಣವನ್ನು ಪಂಚಸಾಕ್ಷಿ-2 ಅಭಿಷೇಕ್ ರವರ ಮೂಲಕ ದೂರುದಾರರ ಪ್ಯಾಂಟ್ ಜೇಬಿನಲ್ಲಿ ಇಡಿಸಿರುತ್ತಾರೆ. ನಂತರ ಅಭಿಷೇಕ್‌ರವರ ಎರಡೂ ಕೈಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿದ್ದು, ಫಿನಾಪ್ತಲಿನ್ ಪೌಡರಿನ ಗುಣಧರ್ಮವನ್ನು ದೂರುದಾರರು ಹಾಗೂ ಪಂಚರಿಗೆ ಮನವರಿಕೆ ಮಾಡಿಕೊಟ್ಟಿರುತ್ತಾರೆ. ನೆರಳುಸಾಕ್ಷಿಯಾದ ಜಗದೀಶ್ ಇವರಿಗೆ ದೂರುದಾರರೊಂದಿಗೆ ಹೋಗಿ ಲಂಚವನ್ನು ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆ ಹಾಗೂ ವಿದ್ಯಮಾನಗಳನ್ನು ಗಮನಿಸಬೇಕು ಎಂದು ಸೂಚನೆ ನೀಡಿರುತ್ತಾರೆ. ಎದುರುದಾರರು ಲಂಚದ ಹಣವನ್ನು ಕೇಳಿದಾಗ ಮಾತ್ರ ಕೊಡುವಂತೆ ಮತ್ತು ಹಣ ಪಡೆದುಕೊಂಡ ನಂತರ ತಲೆ ಸವರಿಕೊಳ್ಳುವ ಮೂಲಕ ಸಂಜ್ಞೆ ನೀಡಬೇಕೆಂದು ತಿಳಿಸಿರುತ್ತಾರೆ. ದೂರುದಾರರಿಗೆ ವಾಯ್ಸ್ ರೆಕಾರ್ಡರ್ ಕೊಟ್ಟು ಲಂಚ ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆಯನ್ನು ರೆಕಾರ್ಡ್ ಮಾಡಿಕೊಳ್ಳಲು ತಿಳಿಸಿರುತ್ತಾರೆ. ಈ ಎಲ್ಲಾ ಘಟನಾವಳಿಗಳನ್ನು ದಿ: 10-07-2018 ರಂದು ಸಮಯ ಮಧ್ಯಾಹ್ನ 12 ರಿಂದ 2 ಘಂಟೆಯವರೆಗೆ ಕೋಲಾರ ಎಸಿಬಿ ಕಛೇರಿಯಲ್ಲಿ ಬರೆದ ಪ್ರಾಯೋಗಿಕ ಪಂಚನಾಮೆಯಲ್ಲಿ ದಾಖಲಿಸಿರುತ್ತಾರೆ.

iii) ಪ್ರಾಯೋಗಿಕ ಪಂಚನಾಮೆ ಮುಗಿದ ನಂತರ ದಾಳಿ ತಂಡದವರು, ಕೋಲಾರವನ್ನು ಬಿಟ್ಟು ಮಧ್ಯಾಹ್ನ 4 ಘಂಟೆಗೆ ಕೆ.ಜಿ.ಎಫ್. ತಲುಪಿ, ವಾಹನವನ್ನು ಪೆಟ್ರೋಲ್ ಬಂಕ್ ಹತ್ತಿರ ನಿಲ್ಲಿಸಿ, ದೂರುದಾರರು ಹಾಗೂ ನೆರಳುಸಾಕ್ಷಿ ಜಗದೀಶ್‌ರವರನ್ನು ಎದುರುದಾರರು ಕೆಲಸ ಮಾಡುವ ಕಛೇರಿಯ ಒಳಗೆ ಕಳುಹಿಸಿ, ದಾಳಿ ತಂಡದವರು ಗೌಪ್ಯವಾಗಿ ಅಲ್ಲಲ್ಲಿ ಸ್ವಲ್ಪ ದೂರದಲ್ಲಿ ಕಾರ್ಯಾಲಯದ ಸುತ್ತಮುತ್ತ ಸಂಶಯಬರದಂತೆ ನಿಂತಿರುತ್ತಾರೆ. ದೂರುದಾರರು ಎದುರುದಾರರನ್ನು ಭೇಟಿ ಮಾಡಿದ್ದು, ಕಛೇರಿಯ ಬಲಭಾಗದ ಪ್ಯಾಸೇಜ್‌ನಲ್ಲಿ ಲಂಚದ ಹಣವನ್ನು ಎದುರುದಾರರು ಪಡೆದುಕೊಂಡು, ಎರಡೂ ಕೈಗಳಿಂದ ಎಣಿಸಿ, ತಮ್ಮ ಶರ್ಟ್‌ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ದೂರುದಾರರ ಸೂಚನೆಯ ಮೇರೆಗೆ ತಕ್ಷಣ ದಾಳಿತಂಡದವರು ಎದುರುದಾರರ ಕಾರ್ಯಾಲಯಕ್ಕೆ

ಬಂದು, ತಮ್ಮ ಪರಿಚಯ ಮಾಡಿಕೊಂಡು ತನಿಖೆಗೆ ಸಹಕರಿಸುವಂತೆ ಎದುರುದಾರರಿಗೆ ತಿಳಿಸಿರುತ್ತಾರೆ. ಎದುರುದಾರರ ಎರಡೂ ಕೈಬೆರಳುಗಳನ್ನು ಸೋಡಿಯಂ ಕಾರ್ಬೋನೆಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಹಣದ ಬಗ್ಗೆ ವಿಚಾರಿಸಲಾಗಿ, ಹಣವನ್ನು ಶರ್ಟ್ ಜೇಬಿನಲ್ಲಿ ಇಟ್ಟುಕೊಂಡಿರುವುದಾಗಿ ತಿಳಿಸಿದ್ದು, ತನಿಖಾಧಿಕಾರಿಯವರ ಸೂಚನೆ ಮೇರೆಗೆ ಪಂಚ-1 ರವರು ಲಂಚದ ಹಣವನ್ನು ಶರ್ಟ್‌ಜೇಬಿನಿಂದ ತೆಗೆದು ಸದರಿ ನೋಟುಗಳ ನಂಬರ್‌ಗಳನ್ನು ತಾಳೆಮಾಡಿ ನೋಡಲಾಗಿ ನೋಟುಗಳ ನಂಬರುಗಳು ತಾಳೆಯಾದ ಮೇರೆಗೆ ತನಿಖಾಧಿಕಾರಿಗಳು ಹಣವನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಶರ್ಟ್‌ಜೇಬಿನ ಒಳಭಾಗವನ್ನು ಸೋಡಿಯಂ ಕಾರ್ಬೋನೆಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಎದುರುದಾರರ ಸ್ವರಕ್ಷಣಾ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ಎದುರುದಾರರು ತಮ್ಮ ಸ್ವರಕ್ಷಣಾ ಹೇಳಿಕೆಯಲ್ಲಿ "ಸಚಿನ್ ಒಂದು ವರ್ಷದಿಂದ ಕೆಲಸಕ್ಕೆ ಹಾಜರಾಗದ ಕಾರಣ ಎರಡು ವರ್ಷದ ಬಿಲ್ಲನ್ನು ತಂದು ನನ್ನ ಹತ್ತಿರ ಹಣ ಇರುವುದಿಲ್ಲವೆಂದು ಹೇಳಿ ಹಣವನ್ನು ತೆಗೆದುಕೊ ಅಂತ ಹೇಳಿದರು, ನನಗೆ ಇದರ ಬಗ್ಗೆ ತಿಳಿಯದು. ಅವರು ನನ್ನ ಹತ್ತಿರ ಹಣವನ್ನು ಇಡಲು ಬಂದರು. ಇನ್ಸ್‌ಪೆಕ್ಟರ್ ಸಾಹೇಬರು ಬಂದು ಅವರ ವಶಕ್ಕೆ ನನ್ನನ್ನು ಪಡೆದರು, ಇದರಲ್ಲಿ ನನ್ನ ಪಾತ್ರ ಇರುವುದಿಲ್ಲ" ಎಂದು ಬರೆದು ಕೊಟ್ಟಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳ ಬಗ್ಗೆ ವಿಚಾರಿಸಲಾಗಿ ತನ್ನ ಟೇಬಲ್ ಮೇಲೆ ಇಟ್ಟಿರುವುದಾಗಿ ಹೇಳಿದ್ದು, ಅದರ ಪ್ರತಿಗಳನ್ನು ತಯಾರಿಸಿ, ವಿಜಯಕುಮಾರ್, ಖಜಾನಾಧಿಕಾರಿ ಇವರು ದೃಢೀಕರಿಸಿದ ಮೇರೆಗೆ ದಾಖಲೆಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಲಂಚಕ್ಕಾಗಿ ಬೇಡಿಕೆ ಇಟ್ಟ ಸಂಭಾಷಣೆಯನ್ನು ಲಿಪಿಕರಿಸಿ, ಅದನ್ನು ಮೂರು ಬಾರಿ ಓದಿಸುವ ಮೂಲಕ ಎದುರುದಾರರ ಹಾಗೂ ದೂರುದಾರರ ಮಾದರಿ ಧ್ವನಿಯನ್ನು ರೆಕಾರ್ಡ್ ಮಾಡಿಕೊಂಡಿರುತ್ತಾರೆ ಮತ್ತು ಅದನ್ನು ಸಿ.ಡಿ.ಗೆ ವರ್ಗಾಯಿಸಿಕೊಂಡಿರುತ್ತಾರೆ. ಲಂಚ ನೀಡುವ ಕಾಲಕ್ಕೆ ರೆಕಾರ್ಡ್ ಮಾಡಿಕೊಳ್ಳಲು ನೀಡಿದ ವಾಯ್ಸ್ ರೆಕಾರ್ಡರನ್ನು ಪ್ಲೇ ಮಾಡಲಾಗಿ ತಾಂತ್ರಿಕ ಕಾರಣಗಳಿಂದಾಗಿ ಸಂಭಾಷಣೆ ರೆಕಾರ್ಡ್ ಆಗಿರುವುದಿಲ್ಲ. ಲಂಚಕ್ಕೆ ಬೇಡಿಕೆ ಇಟ್ಟ ಸಂಭಾಷಣೆಯನ್ನು ಹಿರಿಯ ಅಧಿಕಾರಿ ವಿಜಯಕುಮಾರ್ ಇವರಿಗೆ ಕೇಳಿಸಲಾಗಿ ಅದರಲ್ಲಿದ್ದ ಒಂದು ಧ್ವನಿಯು ಎದುರುದಾರರದೆಂದು ಗುರುತಿಸಿರುತ್ತಾರೆ. ಹನುಮಪ್ಪ ಜೂನಿಯರ್ ಇಂಜಿನಿಯರ್ ಇವರು ಪಂಚರು ತೋರಿಸಿದ ಕೃತ್ಯ ನಡೆದ ಸ್ಥಳದ ಕಚ್ಚಾ ನಕ್ಷೆಯನ್ನು ತಯಾರಿಸಿರುತ್ತಾರೆ. ಈ ಎಲ್ಲಾ ಪ್ರಕ್ರಿಯೆಗಳನ್ನು

ತನಿಖಾಧಿಕಾರಿಗಳು ದಿ: 10/07/2018 ರಂದು ಮಧ್ಯಾಹ್ನ 4.30 ರಿಂದ ರಾತ್ರಿ 9.30 ಗಂಟೆಯವರೆಗೆ ಎದುರುದಾರರು ಕೆಲಸ ಮಾಡುವ ಕಾರ್ಯಾಲಯದಲ್ಲಿ ಬರೆದ ಟ್ರ್ಯಾಪ್ ಮಹಜರ್‌ನಲ್ಲಿ ದಾಖಲಿಸಿರುತ್ತಾರೆ.

iv) ತನಿಖಾ ಕಾಲದಲ್ಲಿ ಎದುರುದಾರರ ಎರಡೂ ಕೈಗಳನ್ನು ತೊಳೆದ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಫಿನಾಪ್ತಲಿನ್ ಅಂಶ ಪತ್ತೆ ಆಗಿರುವುದು ರಾಸಾಯನಿಕ ಪರೀಕ್ಷಾ ವರದಿಯಿಂದ ಕಂಡುಬರುತ್ತದೆ. ಲಂಚಕ್ಕಾಗಿ ಬೇಡಿಕೆ ಇಟ್ಟ ಸಂಭಾಷಣೆಯಲ್ಲಿಯ ಧ್ವನಿಯು ಎದುರುದಾರರದೆಂದು ಪತ್ರಾಂಕಿತ ಉಪ-ಖಜನಾಧಿಕಾರಿ ವಿಜಯಕುಮಾರ್‌ರವರು ಗುರುತಿಸಿದ್ದಾರೆ.

v) ತನಿಖಾಧಿಕಾರಿಗಳು ಪ್ರಕರಣಕ್ಕೆ ಸಂಬಂಧಿಸಿದ ಪ್ರಮುಖ ಘಟನಾವಳಿಗಳನ್ನು ಚಿತ್ರೀಕರಿಸಿರುತ್ತಾರೆ. ಎದುರುದಾರರನ್ನು ಅಂದೇ ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತಾರೆ. ಎದುರುದಾರರನ್ನು ಸೇವೆಯಿಂದ ವಜಾ ಮಾಡಲು ಅಧಿಕಾರಹೊಂದಿದ ಪ್ರಾಧಿಕಾರದಿಂದ ಸದರಿಯವರನ್ನು ಅಭಿಯೋಜನೆಗೊಳಿಸಲು ಮಂಜೂರಾತಿ ಆದೇಶ ಪಡೆದುಕೊಂಡಿರುತ್ತಾರೆ.

19. ಪರಿವೀಕ್ಷಣಾ ಟಿಪ್ಪಣಿಯು ಎದುರುದಾರರಿಗೆ ದಿ: 28/09/2021 ರಂದು ಜಾರಿಯಾಗಿರುತ್ತದೆ. ಈ ತಹಲ್‌ವರೆಗೂ ಎದುರುದಾರರು ತಮ್ಮ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ. ಖಂಡಿಕೆ 16ರಲ್ಲಿ ಮಾನ್ಯ ಉಪಲೋಕಾಯುಕ್ತರು ಎದುರುದಾರರ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ ಎಂದು ದಿ: 13/12/2021 ರಂದು ಆದೇಶ ನೀಡಿದ್ದು ಇರುತ್ತದೆ. ಸಾಕಷ್ಟು ಕಾಲವಕಾಶ ನೀಡಿದಾಗ್ಯೂ ಸಹ ಎದುರುದಾರರು ಉದ್ದೇಶಪೂರ್ವಕವಾಗಿ ತಮ್ಮ ಸಮಜಾಯಿಷಿಯನ್ನು ಸಲ್ಲಿಸದೇ ಇರುವುದು ಕಂಡು ಬರುತ್ತದೆ.

20. ತನಿಖಾ ಕಾಲದಲ್ಲಿ ಸಂಗ್ರಹಿಸಿದ ದಾಖಲೆಗಳನ್ನು ಹಾಗೂ ಸಾಕ್ಷ್ಯಾಧಾರಗಳನ್ನು ಪರಾಂಭರಿಸಲಾಗಿ, ಎದುರುದಾರರು ಮೇಲ್ಕಂಡಂತೆ ದುರ್ನಡತೆ ಎಸಗಿರುವುದು ಮೇಲ್ನೋಟದಲ್ಲಿ ಕಂಡುಬರುತ್ತದೆ.

21. ಎದುರುದಾರರು ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನೀತಿ, ನಿಷ್ಠೆ ಹಾಗೂ ಶ್ರದ್ಧೆಯನ್ನು ಹೊಂದಿರದೆ ಮೇಲ್ಕಂಡಂತೆ ಭ್ರಷ್ಟಾಚಾರವೆಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಕ.ನಾ.ಸೇ. (ನಡತೆ) ನಿಯಮ, 1966, 3(1) (i) to (iv) ರ ಅನ್ವಯ ಶಿಸ್ತುಕ್ರಮಕ್ಕೆ ಒಳಪಡಲು ಬಾಧ್ಯರಾಗಿರುತ್ತಾರೆ.

ಕಂ/ಉಪಲೋಕ್/ಬಿಡಿ/1879/2021
ಪಿ.ಓ.ಎ.ಆರ್.ಇ-5

22. ಆದ್ದರಿಂದ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿರ್ಭಂಧ ಮತ್ತು ಮೇಲ್ಮನವಿ) ನಿಯಮಗಳು 1957, ನಿಯಮ 14(ಎ) ಅನ್ವಯ ಅನುಮತಿ ನೀಡಿ, ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ಅಡಿಯಲ್ಲಿ ದತ್ತವಾದ ಅಧಿಕಾರದ ಅಡಿ ಸಕ್ಷಮ ಪ್ರಾಧಿಕಾರವಾದ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(4) ಪ್ರಕಾರ ಶಿಸ್ತು ಪ್ರಾಧಿಕಾರವು ಈ ವರದಿಯ ಅನ್ವಯ 1 ಮತ್ತು 2 ನೇ ಎದುರುದಾರರಗಳ ವಿರುದ್ಧ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಬಗ್ಗೆ ಈ ವರದಿ ತಲುಪಿದ ದಿನಾಂಕದಿಂದ ಮೂರು (3) ತಿಂಗಳ ಒಳಗಾಗಿ ಈ ಪ್ರಾಧಿಕಾರಕ್ಕೆ ತಿಳಿಸುವುದು.

28/4/22

(ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ)
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು.